# Akashvani : Bangalore

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**25.05.2024 / 18.40 hrs**

ಮುಖ್ಯಾಂಶಗಳು

**೧. ಲೋಕಸಭಾ ಚುನಾವಣಾ ಫಲಿತಾಂಶದ ನಂತರ ಸ್ಥಳೀಯ ಸಂಸ್ಥೆ ಚುನಾವಣೆಗೆ ಸರ್ಕಾರ ಸಿದ್ಧ - ಮುಖ್ಯಮಂತ್ರಿ**

**೨. ರಾಜ್ಯದಲ್ಲಿ ಹದಗೆಟ್ಟ ಕಾನೂನು ಸುವ್ಯವಸ್ಥೆ- ಬಿಜೆಪಿ ಆರೋಪ**

**೩. ಹತ್ತು ಜಿಲ್ಲೆಗಳಲ್ಲಿ ಧಾರಕಾರ ಮಳೆ- ಹವಾಮಾನ ಇಲಾಖೆ ಮುನ್ಸೂಚನೆ**

**೪. ಚಿಕ್ಕಮಗಳೂರು- ಹಾವೇರಿ ಜಿಲ್ಲೆ ಯಲ್ಲಿ ಪ್ರತ್ಯೇಕ ಅಪಘಾತ; ೮ ಮಂದಿ ದುರ್ಮರಣ**

<><*<><>*><>

ಲೋಕಸಭೆ ಚುನಾವಣೆ ಫಲಿತಾಂಶ ಹೊರಬಂದ ನಂತರ ಸ್ಥಳೀಯ ಸಂಸ್ಥೆಗಳ ಚುನಾವಣೆ ನಡೆಸಲು ಸರ್ಕಾರ ಸಿದ್ಧ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಮೈಸೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕ್ಷೇತ್ರ ಪುನರ್ ವಿಂಗಡಣೆ, ಮೀಸಲಾತಿ ನಿಗದಿ ಮುಂತಾದ ಪ್ರಕ್ರಿಯೆಗಳನ್ನು ಆದಷ್ಟು ಬೇಗ ಪೂರ್ಣಗೊಳಿಸಿ, ಚುನಾವಣೆ ನಡೆಸುವುದಾಗಿ ಹೇಳಿದರು. ಕ್ಷೇತ್ರ ಪುನರ್ ವಿಗಂಡಣೆಗೆ ಸಂಬಂಧಪಟ್ಟಂತೆ ರಾಜ್ಯದ ಅಡ್ವೆಕೇಟ್ ಜನರಲ್ ಅವರೊಂದಿಗೆ ಮಾತನಾಡಿ, ಕಾನೂನು ಪ್ರಕಾರ ಕ್ರಮ ಕೈಗೊಳ್ಳಲಾಗುವುದು ಎಂದರು. ಅದೇ ರೀತಿ ಬಿಬಿಎಂಪಿ ಚುನಾವಣೆಯನ್ನು ನಡೆಸುವುದಾಗಿ ಹೇಳಿದರು. ಮಹಿಳೆಯರ ಮೇಲೆ ಲೈಂಗಿಕ ದೌರ್ಜನ್ಯ ಎಸಗಿದ ಆರೋಪ ಎದುರಿಸುತ್ತಿರುವ ಸಂಸದ ಪ್ರಜ್ವಲ್ ರೇವಣ್ಣ ಅವರ ಪಾಸ್‌ಪೋರ್ಟ್ ರದ್ದುಪಡಿಸಿ, ರಾಜ್ಯಕ್ಕೆ ಕರೆತರಲು ಸಹಕರಿಸುವಂತೆ ಕೇಂದ್ರಕ್ಕೆ ಎರಡು ಬಾರಿ ಪತ್ರ ಬರೆಯಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

<><*<><>*><>

ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಹದಗೆಟ್ಟಿದೆ ಎಂದು ಕೇಂದ್ರ ಸಂಸದೀಯ ವ್ಯವಹಾರಗಳ ಸಚಿವ ಪ್ರಲ್ಹಾದ್ ಜೋಶಿ ಆರೋಪಿಸಿದ್ದಾರೆ. ಬಳ್ಳಾರಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯದ ಅನೇಕ ಭಾಗಗಳಲ್ಲಿ ಗಂಭೀರ ಸ್ವರೂಪದ ಅಪರಾಧ ಕೃತ್ಯಗಳು ಸಂಭವಿಸುತ್ತಿದ್ದರೂ ಸರ್ಕಾರ ಅದರ ನಿಯಂತ್ರಣಕ್ಕೆ ಕ್ರಮ ತೆಗೆದುಕೊಳ್ಳುತ್ತಿಲ್ಲ ಎಂದು ದೂರಿದರು. ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರದ ಸಾಧನೆ ಶೂನ್ಯವಾಗಿದೆ. ಕಳೆದ ಒಂದು ವರ್ಷದ ಅವಧಿಯಲ್ಲಿ ಯಾವುದೇ ಅಭಿವೃದ್ಧಿ ಕಾಮಗಾರಿಯನ್ನು ಅನುಷ್ಠಾನ ಮಾಡಿಲ್ಲ, ಗ್ಯಾರಂಟಿ ಯೋಜನೆಗಳ ಹೆಸರಿನಲ್ಲೇ ಕಾಲಹರಣ ಮಾಡಲಾಗುತ್ತಿದೆ ಎಂದು ಸಚಿವ ಪ್ರಲ್ಹಾದ್ ಜೋಶಿ ಆಪಾದಿಸಿದ್ದಾರೆ.

<><*<><>*><>

ರಾಜ್ಯದ ಅಭಿವೃದ್ಧಿಯ ಬಗ್ಗೆ ಸರ್ಕಾರ, ಯಾವುದೇ ಕಾಳಜಿ ವಹಿಸುತ್ತಿಲ್ಲ ಎಂದು ಬಿಜೆಪಿ ನಾಯಕರಾದ ಬಿ.ವೈ.ವಿಜಯೇಂದ್ರ ಹಾಗೂ ಆರ್.ಅಶೋಕ್ ಆರೋಪಿಸಿದ್ದಾರೆ. ಬೆಂಗಳೂರಿನಲ್ಲಿಂದು ಜಂಟಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯ ಸರ್ಕಾರ, ರೈತರೊಂದಿಗೆ ಚೆಲ್ಲಾಟವಾಡುತ್ತಿದೆ. ಬರ ಪರಿಹಾರದ ಹಣವನ್ನು ಸಮರ್ಪಕವಾಗಿ ರೈತರ ಖಾತೆಗೆ ಜಮೆ ಮಾಡುತ್ತಿಲ್ಲ. ಬೆಂಗಳೂರು ನಗರದಲ್ಲಿ ಮಳೆಯಿಂದಾಗಿ ನಾಗರಿಕರು ಅನೇಕ ಸಮಸ್ಯೆಗಳನ್ನು ಎದುರಿಸುತ್ತಿದ್ದಾರೆ. ಗುಂಡಿ ಬಿದ್ದ ರಸ್ತೆಗಳಿಂದ ಅನೇಕ ಅವಘಡಗಳು ಸಂಭವಿಸುತ್ತಿದ್ದರು ಸರ್ಕಾರ ಇದರ ಬಗ್ಗೆ ಗಮನ ಹರಿಸುತ್ತಿಲ್ಲ ಎಂದು ಅವರು ದೂರಿದರು.

<><*<><>*><>

ಮಾವು ಅಭಿವೃದ್ಧಿ ನಿಗಮದ ವತಿಯಿಂದ ಇಂದಿನಿಂದ ಮುಂದಿನ ತಿಂಗಳ ೧೦ರ ವರೆಗೆ ಮಾವು ಮತ್ತು ಹಲಸು ಮೇಳ ಆಯೋಜಿಸಲಾಗಿದೆ. ಬೆಂಗಳೂರಿನ ಲಾಲ್‌ಬಾಗ್‌ನಲ್ಲಿ ಮೇಳ ನಡೆಯಲಿದೆ. ೭೪ ಮಾವು ಮಳಿಗೆ, ೬ ಹಲಸು, ೧೪ ಇತರೆ ಹಣ್ಣಿನ ಮಳಿಗೆಗಳನ್ನು ತೆರೆಯಲಾಗಿದೆ. ಚಿತ್ರದುರ್ಗ, ತುಮಕೂರಿನಿಂದ ಬಾದಾಮಿ, ರಸಪುರಿ, ಮಲಗೋವಾ ಹಾಗೂ ವೈವಿಧ್ಯಮಯ ಹಲಸಿನ ಉತ್ಪನ್ನಗಳು ಮಾರಾಟಕ್ಕೆ ಲಭ್ಯವಾಗಲಿವೆ. ಮೇಳ ಬೆಳಗ್ಗೆ ೭ ರಿಂದ ರಾತ್ರಿ ೭ ಗಂಟೆಯವರೆಗೆ ತೆರದಿರಲಿದೆ ಎಂದು ಮಾವು ನಿಗಮದ ಅಧಿಕಾರಿಗಳು ತಿಳಿಸಿದ್ದಾರೆ.

<><*<><>*><>

ಬಂಡವಾಳ ಹೂಡಿಕೆಗೆ ರಾಜ್ಯ ಉತ್ತಮ ತಾಣವಾಗಿದೆ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹೇಳಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯದಲ್ಲಿ ಬಂಡವಾಳ ಹೂಡಿಕೆಗೆ ಉತ್ತಮ ವಾತಾವರಣ ಕಲ್ಪಿಸಲಾಗಿದೆ. ಈ ನಿಟ್ಟಿನಲ್ಲಿ ಕೈಗಾರಿಕೆ ಮತ್ತು ಐಟಿ-ಬಿಟಿ ಸಚಿವರು ಹೆಚ್ಚಿನ ಕಾಳಜಿ ವಹಿಸಿ, ಕೈಗಾರಿಕೋದ್ಯಮಿಗಳನ್ನು ವಿಶ್ವಾಸಕ್ಕೆ ತೆಗೆದುಕೊಂಡು ಮುನ್ನಡೆಯುತ್ತಿದ್ದಾರೆ ಎಂದರು. ಕೈಗಾರಿಕೋದ್ಯಮಿಗಳು ಬೇರೆ ರಾಜ್ಯಕ್ಕೆ ವಲಸೆ ಹೋಗುತ್ತಿರುವುದು ಮತ್ತು ಬಂಡವಾಳ ಹೂಡಲು ಆಸಕ್ತಿ ತೋರುತ್ತಿಲ್ಲ ಎಂಬ ಆರೋಪಗಳಲ್ಲಿ ಸತ್ಯಾಂಶವಿಲ್ಲ ಎಂದು ಉಪ ಮುಖ್ಯಮಂತ್ರಿ ಸ್ಪಷ್ಟಪಡಿಸಿದರು.

<><*<><>*><>

ರಾಜ್ಯದ ಮುಂದಿನ ೨೪ ಗಂಟೆಗಳಲ್ಲಿ ದಕ್ಷಿಣ ಕನ್ನಡ, ಉಡುಪಿ, ಧಾರವಾಡ, ಹಾವೇರಿ, ಶಿವಮೊಗ್ಗ, ಚಿಕ್ಕಮಗಳೂರು, ಚಿತ್ರದುರ್ಗ, ಮೈಸೂರು, ತುಮಕೂರು, ಕೊಡುಗು ಜಿಲ್ಲೆಗಳ ಧಾರಾಕಾರ ಮಳೆಯಾಗುವ ಸಂಭವವಿದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಕಲಬುರಗಿಯಲ್ಲಿ ದಿನದ ಗರಿಷ್ಠ ೪೦ ಡಿಗ್ರಿ ಸೆಲ್ಸಿಯಸ್ ತಾಪಮಾನ ದಾಖಲಾಗಿದೆ. ಬೆಂಗಳೂರು ಸುತ್ತಮುತ್ತ ಸಾಮಾನ್ಯವಾಗಿ ಮೋಡಕವಿದ ವಾತಾವರಣ. ಹಗುರ ಮತ್ತು ಸಾಧಾರಣ ಮಳೆ ಸಾಧ್ಯತೆ. ಗರಿಷ್ಠ ೩೨, ಕನಿಷ್ಠ ೨೩ ಡಿಗ್ರಿ ಸೆಲ್ಸಿಯಸ್ ತಾಪಮಾನ ಸಂಭವ. ಸಂಕೇಶ್ವರ, ನಾಪೋಕ್ಲು, ಕಿರವತ್ತಿ, ಮೂರ್ನಾಡು, ಭಾಗಮಂಡಲ, ನಿಪ್ಪಾಣಿ, ಚಿಕ್ಕೋಡಿ, ಮುದ್ದೇಬಿಹಾಳ, ಧಾರವಾಡ, ಸೇರಿದಂತೆ ಅನೇಕ ಜಿಲ್ಲೆಗಳಲ್ಲಿ ಮಳೆಯಾಗಿದೆ.

<><*<><>*><>

ದೇಶದ ೫೮ ಲೋಕಸಭಾ ಕ್ಷೇತ್ರಗಳಿಗೆ ನಾಳೆ ೬ನೇ ಹಂತದ ಮತದಾನ ನಡೆಯಲಿದೆ. ಇದಕ್ಕಾಗಿ ಚುನಾವಣಾ ಆಯೋಗ ಸಕಲ ಸಿದ್ಧತೆ ಮಾಡಿಕೊಂಡಿದೆ. ಚುನಾವಣಾ ಕರ್ತವ್ಯಕ್ಕೆ ನಿಯೋಜನೆಗೊಂಡ ಸಿಬ್ಬಂದಿ ಮತ್ತು ಅಧಿಕಾರಿಗಳು ನಿಗದಿತ ಮತಗಟ್ಟೆಗಳತ್ತ ತೆರಳುತ್ತಿದ್ದಾರೆ. ೬ ರಾಜ್ಯಗಳು ಹಾಗೂ ೨ ಕೇಂದ್ರಾಡಳಿತ ಪ್ರದೇಶ ಸೇರಿದಂತೆ ಒಟ್ಟು ೫೮ ಲೋಕಸಭಾ ಕ್ಷೇತ್ರಗಳಲ್ಲಿ ನಾಳೆ ಚುನಾವಣೆ ನಡೆಯಲಿದೆ. ಬಿಹಾರದ ೮, ಹರಿಯಾಣದ ೧೦, ಜಾರ್ಖಂಡ್‌ನ ೪, ಒಡಿಶಾದ ೬, ಉತ್ತರಪ್ರದೇಶದ ೧೪, ಪಶ್ಚಿಮ ಬಂಗಾಳದ ೮, ದೆಹಲಿಯ ಎಲ್ಲಾ ೭ ಹಾಗೂ ಜಮ್ಮು-ಕಾಶ್ಮೀರದ ೧ ಕ್ಷೇತ್ರಗಳಲ್ಲಿ ಚುನಾವಣೆ ನಡೆಯಲಿದೆ. ಮನೇಕಾ ಗಾಂಧಿ, ಮನೋಜ್ ತಿವಾರಿ, ಮನೋಹರ ಲಾಲ್ ಖಟ್ಟರ್, ಭೂಪಿಂದರ್ ಸಿಂಗ್ ಹೂಡಾ ಸೇರಿದಂತೆ ಚುನಾವಣಾ ಕಣದಲ್ಲಿ ೮೮೯ ಅಭ್ಯರ್ಥಿಗಳಿದ್ದಾರೆ. ಈ ನಡುವೆ ಏಳನೆ ಮತ್ತು ಅಂತಿಮ ಹಂತದ ಚುನಾವಣೆಗಾಗಿ ವಿವಿಧ ರಾಜಕೀಯ ಪಕ್ಷಗಳ ನಾಯಕರಿಂದ ಪ್ರಚಾರ ಚುರುಕುಗೊಂಡಿದೆ. ಜೂನ್ ೧ ರಂದು ಕೊನೆಯ ಹಂತದ ಮತದಾನ ನಡೆಯಲಿದೆ. ೪ ರಂದು ಮತ ಎಣಿಕೆ ನಡೆದು ರಾತ್ರಿ ವೇಳೆಗೆ ಸ್ಪಷ್ಟ ಫಲಿತಾಂಶ ಪ್ರಕಟವಾಗುವ ಸಾಧ್ಯತೆಯಿದೆ. ೬ ರಂದು ಚುನಾವಣಾ ಪ್ರಕ್ರಿಯೆ ಪೂರ್ಣಗೊಳ್ಳಲಿದೆ.

<><*<><>*><>

ಜನಪದ ಕಲೆ, ಸಂಪ್ರದಾಯ ಮತ್ತು ಆಚರಣೆಯನ್ನು ಮುಂದಿನ ಪೀಳಿಗೆಗೆ ಸಂರಕ್ಷಿಸಲು ಎಲ್ಲರೂ ಕೈಜೋಡಿಸಬೇಕು ಎಂದು ಶಾಸಕ ಕೊತ್ತನೂರು ಜಿ.ಮಂಜನಾಥ್ ಹೇಳಿದ್ದಾರೆ. ಕೋಲಾರದಲ್ಲಿ ಜರುಗಿನ ಹೂವಿನ ಕರಗ ಮಹೋತ್ಸವದಲ್ಲಿ ಭಾಗವಹಿಸಿ ಮಾತನಾಡಿದ ಅವರು, ನಾಡಿನ ಜನಪದ ಕಲೆಗೆ ತನ್ನದೇ ಆದ ಇತಿಹಾಸ, ಪರಂಪರೆ ಇದೆ. ಈ ಪರಂಪರೆ ಮೌಲ್ಯಯುತವಾಗಿದ್ದು, ಅವುಗಳನ್ನು ನಿರಂತರವಾಗಿ ಆಚರಿಸಿಕೊಂಡು ಬಂದರೆ, ಅವು ಮುಂದಿನ ಪೀಳಿಗೆಗೆ ಜೀವಂತವಾಗಿ ಉಳಿಯುತ್ತವೆ ಎಂದು ಅವರು ಅಭಿಪ್ರಾಯಪಟ್ಟರು.

<><*<><>*><>

ಬೆಳೆ ಪರಿಹಾರದ ಹಣವನ್ನು ರೈತರ ಖಾತೆಗೆ ಜಮೆ ಮಾಡುವಂತೆ ಕೋಲಾರ ಬಿಜೆಪಿ ರೈತ ಮೋರ್ಚಾ ಜಿಲ್ಲಾ ಸಮಿತಿಯ ಪದಾಧಿಕಾರಿಗಳು ಜಿಲ್ಲಾಧಿಕಾರಿ ಕಚೇರಿ ಎದುರು ಪ್ರತಿಭಟನೆ ನಡೆಸಿದರು. ಜಿಲ್ಲಾ ಅಧ್ಯಕ್ಷ ಕೊಮ್ಮನಹಳ್ಳಿ ಆರ್.ಆನಂದ್ ಮಾತನಾಡಿ, ರಾಜ್ಯದಲ್ಲಿ ಹಿಂದಿನ ವರ್ಷ ಮಳೆಯ ಕೊರತೆಯಿಂದ ಬರಗಾಲ ಸೃಷ್ಟಿಯಾಗಿದ್ದು, ರೈತರು ಸೇರಿದಂತೆ ಕೃಷಿ ಕಾರ್ಮಿಕರು ತೀವ್ರ ಸಂಕಷ್ಟಕ್ಕೆ ಗುರಿಯಾಗಿದ್ದಾರೆ. ರಾಜ್ಯ ಸರ್ಕಾರ, ಕೂಡಲೇ ಪರಿಹಾರ ಕೈಗೊಳಬೇಕಿದೆ. ಕೇಂದ್ರ ಸರ್ಕಾರ ೨ ಸಾವಿರದ ೪೫೪ ಕೋಟಿ ರೂಪಾಯಿಗಳ ಬೆಳೆ ಪರಿಹಾರ ಹಣ ಬಿಡುಗಡೆ ಮಾಡಿದ್ದು, ಇದನ್ನು ಎಲ್ಲ ರೈತರಿಗೆ ತಲುಪುವಂತೆ ನೋಡಿಕೊಳ್ಳಬೇಕು. ಇದರ ಜೊತೆಗೆ ಹೈನುಗಾರರಿಗೆ ೮ ತಿಂಗಳ ಪ್ರೋತ್ಸಾಹಧನವನ್ನು ಕೋಡಲೇ ಬಿಡುಗಡೆ ಮಾಡಬೇಕು ಎಂದು ಒತ್ತಾಯಿಸಿದರು.

<><*<><>*><>

ಬಾಗಲಕೋಟೆ ಜಿಲ್ಲೆಯಲ್ಲಿ ನಿನ್ನೆ ಸುರಿದ ಬಾರಿ ಮಳೆ ಹಾಗೂ ಗಾಳಿಯಿಂದ ಉಂಟಾದ ಹಾನಿಗೆ ಸೂಕ್ತ ಪರಿಹಾರ ನೀಡಲು ಕ್ರಮಕೈಗೊಳ್ಳಲಾಗುತ್ತಿದೆ ಎಂದು ಜಿಲ್ಲಾಧಿಕಾರಿ ಜಾನಕಿ ಕೆ.ಎಂ ತಿಳಿಸಿದ್ದಾರೆ. ಮಳೆಯಿಂದ ಹಾನಿಗೊಳಗಾದ ಪ್ರದೇಶಗಳಿಗೆ ಭೇಟಿ ನೀಡಿ ವರದಿ ಸಲ್ಲಿಸುಂತೆ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ಅಧಿಕಾರಿಗಳು ನೀಡುವ ವರದಿ ಆಧರಿಸಿ ಸೂಕ್ತ ಪರಿಹಾರ ನೀಡಲು ಕ್ರಮಕೈಗೊಳ್ಳಲಾಗುವುದು ಎಂದರು.

<><*<><>*><>

ಮಾನಸಿಕ ತೊಂದರೆಯಿಂದ ಬಳಲುತ್ತಿರುವವರನ್ನು ಪ್ರೀತಿ- ವಿಶ್ವಾಸದಿಂದ ನೋಡಿಕೊಳ್ಳಬೇಕು ಎಂದು ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ವಿ.ಪ್ರಕಾಶ ಹೇಳಿದ್ದಾರೆ. ಹಾವೇರಿಯಲ್ಲಿಂದು ಆಯೋಜಿಸಿದ್ದ ವಿಶ್ವ ಸ್ಕಿಜೋಫ್ರೀನಿಯಾ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ, ಅವರು ಮಾತನಾಡಿದರು. ಮಾನಸಿಕ ಅಸ್ವಸ್ಥರಿಗೂ ಸಾಮಾನ್ಯ ವ್ಯಕ್ತಿಗಳಂತೆ ಗೌರವದಿಂದ ಬದುಕುವ ಹಕ್ಕಿದೆ. ಮಾನಸಿಕ ರೋಗಿಗಳಿಗೂ ಎಲ್ಲ ಮೂಲ ಸೌಕರ್ಯಗಳು ದೊರೆಯಬೇಕು. ಮಾನಸಿಕ ರೋಗಿಗಳನ್ನು ಆಪ್ತ ಸಮಾಲೋಚನೆ ಮೂಲಕ ಗುಣಪಡಿಸಲು ಸಾಧ್ಯವಿದೆ. ಸಮಾಜ ಆರೋಗ್ಯವಾಗಿರಬೇಕಾದರೆ ಮಾನಸಿಕ ಆರೋಗ್ಯ ಚೆನ್ನಾಗಿರಬೇಕು ಎಂದು ತಿಳಿಸಿದರು.

<><*<><>*><>

ಉತ್ತರ ಕನ್ನಡ ಜಿಲ್ಲೆಯಲ್ಲಿ ಪ್ರಸ್ತುತ ಮುಂಗಾರು ಸಂದರ್ಭದಲ್ಲಿ ತಲೆದೋರುವ ಯಾವುದೇ ರೀತಿಯ ವಿಪತ್ತುಗಳನ್ನು ಸಮರ್ಥವಾಗಿ ಎದುರಿಸಲು ಸಿದ್ಧರಾಗಬೇಕು ಎಂದು ಜಿಲ್ಲಾಧಿಕಾರಿ ಗಂಗೂಬಾಯಿ ಮಾನಕರ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ಮುಂಗಾರು ಸಂದರ್ಭದಲ್ಲಿ ಕೈಗೊಳ್ಳಬೇಕಾದ ಮುಂಜಾಗ್ರತಾ ಕ್ರಮಗಳ ಕುರಿತು ಕಾರವಾರದಲ್ಲಿಂದು ನಡೆದ ಸಭೆಯಲ್ಲಿ ಅವರು ಮಾತನಾಡಿದರು. ಜಿಲ್ಲೆಯ ಎಲ್ಲಾ ನಗರ ಸ್ಥಳೀಯ ಸಂಸ್ಥೆಗಳು ಹಾಗೂ ಗ್ರಾಮ ಪಂಚಾಯತ್‌ಗಳಲ್ಲಿ ಒಳ ಚರಂಡಿ ಹಾಗೂ ನೀರು ಹರಿದು ಹೋಗುವ ಕಾಲುವೆಗಳನ್ನು ಸ್ವಚ್ಛಗೊಳಿಸಬೇಕು. ಕುಡಿಯುವ ನೀರಿನ ಮೂಲಗಳನ್ನು ಸ್ವಚ್ಛಗೊಳಿಸಿ, ಯಾವುದೇ ರೀತಿಯಲ್ಲಿ ಕಲುಷಿತಗೊಳ್ಳದಂತೆ ಎಚ್ಚರವಹಿಸುವುದರ ಜೊತೆಗೆ ಸಾರ್ವಜನಿಕರ ಕುಂದುಕೊರತೆಗೆ ಗ್ರಾಮೀಣ ಮಟ್ಟದಲ್ಲಿ ಹಾಗೂ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಗಳಲ್ಲಿ ಸ್ಪಂದಿಸಲು ದಿನದ ೨೪ ಗಂಟೆ ಕಾರ್ಯ ನಿರ್ವಹಿಸುವ ನಿಯಂತ್ರಣಾ ಕೊಠಡಿ ಸ್ಥಾಪಿಸುವಂತೆ ತಿಳಿಸಿದರು. ತುರ್ತು ಸಂದರ್ಭದಲ್ಲಿ ಸಾರ್ವಜನಿಕರ ರಕ್ಷಣಾ ಕಾರ್ಯಾಚರಣೆಗೆ ಸಂಬಂಧಿಸಿದಂತೆ ಅಗತ್ಯ ಸಿದ್ಧತೆ ಮಾಡಿಕೊಳ್ಳಬೇಕು. ಅವಘಡಗಳು ಸಂಭವಿಸಬಹುದಾದ ಸ್ಥಳಗಳನ್ನು ಮೊದಲೇ ಗುರುತಿಸಬೇಕು ಎಂದು ಪೋಲಿಸ್ ಹಾಗೂ ಅಗ್ನಿ ಶಾಮಕ ಅಧಿಕಾರಿಗಳಿಗೆ ಸೂಚನೆ ನೀಡಿದರು. ಶರಾವತಿ ಮತ್ತು ಲಿಂಗನಮಕ್ಕಿ ಜಲಾಶಯಗಳಿಂದ ನೀರನ್ನು ಬಿಡುವ ಮೊದಲು ಸಂಬಂಧಿಸಿದ ತಹಶೀಲ್ದಾರರು ಹಾಗೂ ಸಹಾಯಕ ಆಯುಕ್ತರಿಗೆ ಹಾಗೂ ಸಾರ್ವಜನಿಕರಿಗೆ ಮಾಹಿತಿ ನೀಡಬೇಕು. ಜಲಾಶಯಗಳ ಗೇಟುಗಳು, ವಾಲ್‌ಗಳ ಕಾರ್ಯಕ್ಷಮತೆಯನ್ನು ಪರಿಶೀಲಿಸುತ್ತಿರಬೇಕು. ಜಲಾಶಯದ ಒಳಹರಿವು, ಹೊರಹರಿವು, ನೀರಿನ ಮಟ್ಟಗಳ ಕುರಿತು ಪ್ರತಿ ದಿನ ಜಿಲ್ಲಾಧಿಕಾರಿಗಳ ಕಾರ್ಯಾಲಯದ ಕಂಟ್ರೋಲ್ ರೂಮ್‌ಗೆ ಮಾಹಿತಿ ನೀಡಬೇಕು ಎಂದರು. ಜಿಲ್ಲೆಯ ಎಲ್ಲಾ ಸಹಾಯಕ ಆಯುಕ್ತರು ಹಾಗೂ ತಹಶೀಲ್ದಾರ್‌ಗಳು, ತಾಲೂಕು ಮಟ್ಟದ ಹಾಗೂ ಉಪವಿಭಾಗ ಮಟ್ಟದ ವಿಪತ್ತು ನಿರ್ವಹಣಾ ಯೋಜನೆಯನ್ನು ತಯಾರಿಸಿ, ಪ್ರವಾಹ ಸಂಭವಿಸಬಹುದಾದಂತಹ ಪ್ರದೇಶಗಳನ್ನು ಗುರುತಿಸಬೇಕು. ಆ ಪ್ರದೇಶಗಳಿಗೆ ನೋಡಲ್ ಅಧಿಕಾರಿಗಳನ್ನು ನೇಮಿಸಿ, ರಕ್ಷಣಾ ಕಾರ್ಯಾಚರಣೆಯ ಕುರಿತಂತೆ, ಮುಳುಗುತಜ್ಞರ ವಿವರ, ವೃತ್ತಿಪರ ಈಜುಗಾರರ ವಿವರ, ದೋಣಿಗಳ ಮಾಲೀಕರ ವಿವರ, ಕಾಳಜಿ ಕೇಂದ್ರಗಳ ವಿವರಗಳನ್ನೊಳಗೊಂಡ ಸವಿವರವಾದ ತಾಲೂಕು ಮಟ್ಟದ ಹಾಗೂ ಉಪವಿಭಾಗ ಮಟ್ಟದ ವಿಪತ್ತುನಿರ್ವಹಣಾ ಕ್ರೀಯಾಯೋಜನೆಯನ್ನು ತಯಾರಿಸಬೇಕು ಎಂದು ಜಿಲ್ಲಾಧಿಕಾರಿ ಹೇಳಿದ್ದಾರೆ.

<><*<><>*><>

ರಾಜ್ಯದಲ್ಲಿಂದು ಸಂಭವಿಸಿದ ಎರಡು ಪ್ರತ್ಯೇಕ ಅಪಘಾತದಲ್ಲಿ ೮ ಮಂದಿ ದುರ್ಮರಣಕ್ಕೀಡಾಗಿದ್ದಾರೆ. ಚಿಕ್ಕಮಗಳೂರು ಜಿಲ್ಲೆಯ ಮೂಡಿಗೆರೆ ತಾಲೂಕಿನಲ್ಲಿ ಇಂದು ಸಂಭವಿಸಿದ ಅಪಘಾತದಲ್ಲಿ ಒಂದೇ ಕುಟುಂಬದ ನಾಲ್ವರು ಮೃತಪಟ್ಟಿದ್ದಾರೆ. ಈ ಘಟನೆಯಲ್ಲಿ ಇತರೆ ಮೂವರು ಗಂಭೀರವಾಗಿ ಗಾಯಗೊಂಡಿದ್ದಾರೆ. ಬಣಕಲ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಹಾವೇರಿ ಜಿಲ್ಲೆಯ ರಾಣೆಬೆನ್ನೂರು ಬಳಿ ಸಂಭವಿಸಿದ ಮತ್ತೊಂದು ರಸ್ತೆ ಅಪಘಾತದಲ್ಲಿ ನಾಲ್ವರು ಮೃತಪಟ್ಟಿದ್ದಾರೆ. ಕಾರು ಸೇತುವೆಯಿಂದ ಕೆಳಗೆ ಬಿದ್ದ ಪರಿಣಾಮ ಈ ಅಪಘಾತ

ಸಂಭವಿಸಿದ್ದು, ಆರು ಮಂದಿ ಗಾಯಗೊಂಡಿದ್ದಾರೆ. ಹಾವೇರಿಯಿಂದ ತಿರುಪತಿಗೆ ಹೋಗುವಾಗ ಈ ಅವಘಡ ಸಂಭವಿಸಿದೆ.

<><*<><>*><>

ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಮತ ಎಣಿಕೆ ಜೂನ್ ೪ ರಂದು ಸರ್ಕಾರಿ ವಿಜ್ಞಾನ ಕಾಲೇಜು ಆವರಣದಲ್ಲಿ ನಡೆಯಲಿದೆ ಎಂದು ಜಿಲ್ಲಾಧಿಕಾರಿ ವೆಂಕಟೇಶ್ ಹೇಳಿದ್ದಾರೆ. ಚಿತ್ರದುರ್ಗದಲ್ಲಿಂದು ರಾಜಕೀಯ ಪಕ್ಷಗಳ ಅಭ್ಯರ್ಥಿಗಳಿಗಾಗಿ ಏರ್ಪಡಿಸಿದ್ದ ತರಬೇತಿ ಶಿಬಿರದಲ್ಲಿ ಅವರು ಮಾತನಾಡಿದರು. ಪ್ರತಿ ವಿಧಾನಸಭಾ ಕ್ಷೇತ್ರಕ್ಕೆ ಸಂಬಂಧಪಟ್ಟಂತೆ ಪ್ರತ್ಯೇಕವಾಗಿ ಮತ ಎಣಿಕೆ ನಡೆಯಲಿದೆ. ಪ್ರತಿ ವಿಧಾನಸಭಾ ಕ್ಷೇತ್ರಕ್ಕೆ ೧೪ ಟೇಬಲ್‌ಗಳನ್ನು ನಿಗದಿಪಡಿಸಲಾಗಿದೆ. ಬೆಳಿಗ್ಗೆ ೮ ಗಂಟೆಯಿಂದ ಅಂಚೆ ಮತ ಎಣಿಕೆ ಮತ್ತು ವಿದ್ಯುನ್ಮಾನ ಯಂತ್ರಗಳ ಮತ ಎಣಿಕೆ ಆರಂಭಿಸಲಾಗುತ್ತದೆ ಎಂದು ಅವರು ತಿಳಿಸಿದರು.

<><*<><>*><>

ಮಂಗಳೂರು ನಗರದಲ್ಲಿ ಫುಟ್‌ಪಾತ್ ಒತ್ತುವರಿ ಹಾಗೂ ವಾಹನಗಳ ಪಾರ್ಕಿಂಗ್ ಉಲ್ಲಂಘನೆ ವಿರುದ್ಧ ಕ್ರಮ ಜರುಗಿಸಲಾಗುವುದು ಎಂದು ಪೊಲೀಸ್ ಕಮಿಷನರ್ ಅನುಪಮ್ ಅಗರ್‌ವಾಲ್ ಹೇಳಿದ್ದಾರೆ. ಮಂಗಳೂರು ಪೊಲೀಸ್ ಕಮಿಷನರ್ ಕಚೇರಿಯಲ್ಲಿಂದು ನಡೆದ ಫೋನ್ ಇನ್ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ನಗರದ ಪ್ರಮುಖ ರಸ್ತೆಗಳನ್ನು ಆಕ್ರಮಿಸಿ ವ್ಯಾಪಾರ ವಹಿವಾಟು ನಡೆಯುತ್ತಿದ್ದು, ಇದರಿಂದ ವಾಹನ ಸಂಚಾರಕ್ಕೂ ತೊಡಕಾಗಿದೆ. ಈ ಬಗ್ಗೆ ಸಾರ್ವಜನಿಕರಿಂದ ದೂರುಗಳು ಬಂದಿವೆ. ಮಂಗಳೂರಲ್ಲಿ ಸಂಚಾರ ಸಮಸ್ಯೆ ನಿವಾರಣೆಗೆ ಮಹಾನಗರ ಪಾಲಿಕೆ, ಸ್ಮಾರ್ಟ್‌ಸಿಟಿ ಹಾಗೂ ಜಿಲ್ಲಾಡಳಿತದ ಸಹಕಾರದೊಂದಿಗೆ ಕ್ರಮ ಕೈಗೊಳ್ಳಲಾಗುವುದು ಎಂದರು. ಫುಟ್‌ಪಾತ್ ಅತಿಕ್ರಮಣ, ನೋ ಪಾರ್ಕಿಂಗ್‌ಗಳಲ್ಲಿ ನಿಲುಗಡೆ ಹಾಗೂ ಸಂಚಾರಿ ನಿಯಮ ಉಲ್ಲಂಘಿಸುವವರ ವಿರುದ್ಧ ಕಾರ್ಯಾಚರಣೆ ನಡೆಸಲಾಗುವುದು. ವಾಹನ ದಟ್ಟಣೆ ಇರುವಲ್ಲಿ ಸಂಚಾರಿ ಪೊಲೀಸರನ್ನು ನಿಯೋಜಿಸಲಾಗುವುದು ಎಂದು ಕಮಿಷನರ್ ಭರವಸೆ ನೀಡಿದರು.

<><*<><>*><>

ಮಳೆಗಾಲ ಹತ್ತಿರವಾಗುತ್ತಿದ್ದು, ವಿದ್ಯುತ್ ಅವಘಡಗಳು ಸಂಭವಿಸುವ ಸಾಧ್ಯತೆ ಇರುವುದರಿಂದ ಅಗತ್ಯ ಮುನ್ನೆಚ್ಚರಿಕೆ ಕ್ರಮ ಕೈಗೊಳ್ಳುವಂತೆ ಮಂಗಳೂರು ವಿದ್ಯುಚ್ಛಕ್ತಿ ಸರಬರಾಜು ಕಂಪೆನಿ - ಮೆಸ್ಕಾಂ ತಿಳಿಸಿದೆ. ಭಾರೀ ಗಾಳಿ ಮಳೆಯ ಸಂದರ್ಭದಲ್ಲಿ ವಿದ್ಯುತ್ ಕಂಬಗಳು ಉರುಳಿ ಬಿದ್ದು ಅಪಾಯ ಉಂಟಾಗುವ ಸಾಧ್ಯತೆ ಇದೆ. ಈ ಸಂದರ್ಭದಲ್ಲಿ ಜಾನುವಾರುಗಳನ್ನು ವಿದ್ಯುತ್ ಕಂಬಕ್ಕೆ ಕಟ್ಟುವುದಾಗಲೀ, ಬಟ್ಟೆ ಒಣಗಲು ವಿದ್ಯುತ್ ಕಂಪೆನಿಯ ಸಾಮಾಗ್ರಿಗಳನ್ನು ಬಳಸುವುದಾಗಲೀ ಮಾಡಬಾರದು. ವಿದ್ಯುತ್‌ನ ಅವಘಡದ ಬಗ್ಗೆ ಮುನ್ಸೂಚನೆ ಕಂಡು ಬಂದಲ್ಲಿ ತಕ್ಷಣ ದಿನದ ೨೪ ಗಂಟೆಯೂ ಕಾರ್ಯ ನಿರ್ವಹಿಸುತ್ತಿರುವ ಗ್ರಾಹಕ ಸೇವಾ ಕೇಂದ್ರದ ಸಂಖ್ಯೆ ೧೯೧೨ ಕ್ಕೆ ಮಾಹಿತಿ ನೀಡಬೇಕು ಎಂದು ಪ್ರಕಟಣೆ ತಿಳಿಸಿದೆ.

<><*<><>*><>

ಚೆನ್ನೈನ ಎಂ. ಚಿದಂಬರಂ ಕ್ರೀಡಾಂಗಣದಲ್ಲಿಂದು ನಡೆಯಲಿರುವ ಐಪಿಎಲ್ ಟಿ-೨೦ ಟೂರ್ನಿಯ ೨ನೇ ಕ್ವಾಲಿಫೈಯರ್ ಪಂದ್ಯದಲ್ಲಿ ರಾಜಸ್ಥಾನ್ ರಾಯಲ್ಸ್ ತಂಡ ಮತ್ತು ಸನ್ ರೈಸರ್ಸ್ ಹೈದರಾಬಾದ್ ತಂಡ ಫೈನಲ್ ಪ್ರವೇಶಿಸಲು ಸೆಣಸಲಿವೆ. ಪಂದ್ಯ ರಾತ್ರಿ ೭.೩೦ಕ್ಕೆ ಆರಂಭವಾಗಲಿದೆ. ಈಗಾಗಲೇ ಮೊದಲ ಕ್ವಾಲಿಫೈಯರ್ ಪಂದ್ಯದಲ್ಲಿ ಸನ್ ರೈಸರ್ಸ್ ಹೈದರಾಬಾದ್ ವಿರುದ್ಧ ಗೆಲುವು ಸಾಧಿಸಿರುವ ಕೊಲ್ಕೊತ್ತಾ ನೈಟ್ ರೈಡರ್ಸ್ ಫೈನಲ್ ಪ್ರವೇಶಿಸಿದೆ. ಫೈನಲ್ ಪಂದ್ಯ ಇದೇ ೨೬ರ ಭಾನುವಾರದಂದು ನಡೆಯಲಿದೆ.

<><*<><>*><>

ಇನ್ನು ಸಂಕ್ಷಿಪ್ತಸುದ್ದಿ....

೧. ಮುಖ್ಯಮಂತ್ರಿ ಸಿದ್ದರಾಮಯ್ಯ ನಾಳೆ ದಕ್ಷಿಣ ಕನ್ನಡ ಜಿಲ್ಲಾ ಪ್ರವಾಸ ಕೈಗೊಳ್ಳಲಿದ್ದಾರೆ.

೨. ಮಳೆಗಾಲ ಆರಂಭವಾಗಿರುವ ಹಿನ್ನೆಲೆಯಲ್ಲಿ ಸೊಳ್ಳೆಗಳು ಉತ್ಪತ್ತಿಯಾಗದಂತೆ ಶಾಲಾ-ಕಾಲೇಜು ಆವರಣವನ್ನು ಸ್ವಚ್ಛವಾಗಿಟ್ಟುಕೊಳ್ಳಬೇಕು ಎಂದು ಹಾವೇರಿ ಜಿಲ್ಲಾಧಿಕಾರಿ ರಘನಂದನ ಮೂರ್ತಿ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

೩. ಚಿತ್ರದುರ್ಗ ಜಿಲ್ಲೆಯಲ್ಲಿ ಪ್ರಸಕ್ತ ಸಾಲಿನ ಮುಂಗಾರು ಹಂಗಾಮಿನ ಬಿತ್ತನೆ ಬೀಜ ವಿತರಣೆಗೆ ಜಿಲ್ಲೆಯಲ್ಲಿ ಒಟ್ಟು ೩೧ ಸಾವಿರದ ೮೧೦ ಕ್ವಿಂಟಾಲ್ ಬಿತ್ತನೆ ಬೀಜ ದಾಸ್ತಾನು ಮಾಡಲಾಗಿದೆ.